# APRIL 11, 2025
# AKASHAVANI - DHARWAD
# PRADESH SAAMACHARA (KANNADA) 12.00 P.M.

****

ಮುಂಬರುವ 15 ದಿನಗಳಲ್ಲಿ, ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಗೃಹ ಆರೋಗ್ಯ ಯೋಜನೆ ಜಾರಿಗೊಳ್ಳಲಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ನಗರದ, ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ, ಪ್ರಧಾನಮಂತ್ರಿ ಮೂಲಸೌಕರ್ಯ ಮಿಷನ್ ಯೋಜನೆ ಅಡಿ, 50 ಹಾಸಿಗೆಗಳ ತೀವ್ರ ನಿಗಾ ಆರೈಕೆ ಘಟಕಕ್ಕೆ, ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದ ಅವರು, ಮನೆ ಬಾಗಿಲಲ್ಲಿಯೇ ಅನಾರೋಗ್ಯ ಸಮಸ್ಯೆ ಪತ್ತೆ ಹಚ್ಚಿ, ಸೂಕ್ತ ಚಿಕಿತ್ಸೆ ಮತ್ತು ಉಚಿತ ಔಷಧೋಪಚಾರ ಒದಗಿಸುವದು ಯೋಜನೆಯ ಉದ್ದೇಶ. ಕೋಲಾರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನಗೊಂಡ ಈ ಯೋಜನೆ, ಯಶಸ್ವಿಯಾಗಿದೆ ಎಂದರು.

ಧ್ವನಿ–ದಿನೇಶ ಗುಂಡೂರಾವ್– 30 ಸೆಕೆಂಡ್ಸ್

****

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ, ಹಾಸನದಲ್ಲಿ ನಾಳೆ ಮತ್ತು ನಾಡಿದ್ದು, ಹಾಸನ ಜಿಲ್ಲೆ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಆಯೋಜಿಸಿರುವ, ರಾಜ್ಯ ಮಟ್ಟದ ಪತ್ರಕರ್ತರ ಕ್ರಿಕೆಟ್ ಕ್ರೀಡಾಕೂಟದ ಲಾಂಛನವನ್ನು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿ ಬಿಡುಗಡೆ ಮಾಡಿ, ಶುಭ ಹಾರೈಸಿದರು.

****

ಕಲ್ಯಾಣ ಕರ್ನಾಟಕದ, ಉದ್ಯೋಗಾಕಾಂಕ್ಷಿಗಳಿಗೆ ಅನುಕೂಲ ಕಲ್ಪಿಸಲು, ಇದೇ 16 ರಂದು, ಕಲಬುರಗಿಯಲ್ಲಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು, ಸಚಿವ ಶರಣಪ್ರಕಾಶ ಪಾಟೀಲ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಈ ಮಾಹಿತಿ ನೀಡಿರುವ ಅವರು, ಯುವ ಸಮೂಹಕ್ಕೆ ಉದ್ಯೋಗ ಸೃಷ್ಟಿ ಮಾಡಬೇಕೆನ್ನುವ ಆಶಯಕ್ಕೆ ಪೂರಕವಾಗಿ ಈ ಮೇಳ ಆಯೋಜಿಸುವ ಮೂಲಕ ನಮ್ಮ ಸರ್ಕಾರ ನುಡಿದಂತೆ ನಡೆದಿದೆ ಎಂದಿದ್ದಾರೆ.

****

ಕೊಂಕಣ ರೈಲ್ವೆ ಹಾಗೂ ಹಾಸನ–ಮಂಗಳೂರು ರೈಲ್ವೆ ಅಭಿವೃದ್ಧಿ ನಿಗಮ–ಎಚ್‌ಎಂಆರ್‌ಡಿಸಿಎಲ್‌ನ್ನು ಭಾರತೀಯ ರೈಲ್ವೆ ಜೊತೆ ವಿಲೀನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ರೈಲ್ವೆ ಸಚಿವರೊಂದಿಗೆ ಈಗಾಗಲೇ ಮಾತುಕತೆ ನಡೆಸಲಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಲೀನ ಪ್ರಕ್ರಿಯೆ ನಡೆದರೆ ಈ ಭಾಗಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಈ ನಿಟ್ಟಿನಲ್ಲಿ ವಿಶೇ ’ ಪ್ರಯತ್ನ ಸಾಗಿದೆ ಎಂದರು.

****

ಮುಖ್ಯಮಂತ್ರಿ ಸಿದ್ದರಾಮಯ್ಯ ಇದೇ 16 ರಂದು, ಬೀದರಗೆ ಭೇಟಿ ನೀಡಿ, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ, ಚಾಲನೆ ನೀಡಲಿದ್ದಾರೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

****

ಭಗವಾನ ಮಹಾವೀರರು ಜಗತ್ತಿಗೆ ಅಹಿಂಸೆ, ಶಾಂತಿ ಸೇರಿದಂತೆ ಸುಂದರ ಸಮಾಜ ರೂಪಗೊಳ್ಳಲು ಅಗತ್ಯವಿರುವ ನೀತಿ, ತತ್ವ, ಸಿದ್ಧಾಂತಗಳನ್ನು ಬೋಧಿಸಿದರು ಎಂದು ಅಂತರಾಷ್ಟ್ರೀಯ ಜೈನ ವಿದ್ವಾಂಸ ಮೈಸೂರಿನ ಡಾ.ಶುಭಚಂದ್ರ ಅವರು ಹೇಳಿದರು. ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲಾಡಳಿತ ಆಯೋಜಿಸಿದ್ದ ಭಗವಾನ್ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಜೈನ ಧರ್ಮವು, ಭಾರತವು ಜಗತ್ತಿಗೆ ನೀಡಿದ ಬಹು ದೊಡ್ಡ ಕೊಡುಗೆ ಎಂದು ಬಣ್ಣಿಸಿದರು.

****

ಹಾಸನ ಶ್ರವಣಬೆಳಗೊಳದ ಚಾವುಂಡರಾಯ ಸಭಾಮಂಟಪದಲ್ಲಿ ನಡೆದ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್  ಪಾಲ್ಗೊಂಡಿದ್ದರು. ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ, ಸಂಸದ ಶ್ರೇಯಸ್ ಪಟೇಲ್, ಸಚಿವ ಸುಧಾಕರ್, ಶಾಸಕ ಬಾಲಕೃ ್ಣ ಸೇರಿದಂತೆ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

****

ಉತ್ತರಕನ್ನಡ ಜಿಲ್ಲೆ, ಯಲ್ಲಾಪುರದಲ್ಲಿ ಇಂದು, ಬಿಜೆಪಿ ಜನಾಕ್ರೋಷ ಯಾತ್ರೆ ಆಯೋಜಿತವಾಗಿದೆ ಎಂದು, ಜಿಲ್ಲಾ ಬಿಜೆಪಿ ಅಧ್ಯಕ್ಷ ಎನ್.ಎಸ್.ಹೆಗಡೆ ತಿಳಿಸಿದ್ದಾರೆ.

****

ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ, ವಿ.ಸೋಮಣ್ಣ, ಇಂದು, ಹಾವೇರಿಯ ಶ್ರೀ ಮೈಲಾರ ಮಹಾದೇವಪ್ಪ ರೈಲು ನಿಲ್ದಾಣದಲ್ಲಿ, ಧಾರವಾಡ–ಬೆಂಗಳೂರು ಮಧ್ಯೆ ಸಂಚರಿಸುವ, 'ವಂದೇ ಭಾರತ' ರೈಲು ನಿಲುಗಡೆಗೆ, ಚಾಲನೆ ನೀಡಲಿದ್ದಾರೆ.

****

ಬೆಲೆ ಏರಿಕೆ ಖಂಡಿಸಿ, ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ, ಇದೇ 17 ರಂದು ಕಾಂಗ್ರೆಸ್ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಬೆಂಗಳೂರಿನಲ್ಲಿ ತಿಳಿಸಿದ್ದಾರೆ.

****

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ, ಮೇ 10ರ ಒಳಗೆ ಆಸ್ತಿ ತೆರಿಗೆ ಪಾವತಿಸುವವರಿಗೆ, ಶೇಕಡ 5 ರಷ್ಟು ರಿಯಾಯಿತಿ ಪ್ರಕಟಿಸಿದೆ.

****

'ನಮ್ಮ ಸಂವಿಧಾನ, ನಮ್ಮ ಕಲರವ' ಧ್ಯೇಯದಡಿ, ಧಾರವಾಡ ರಂಗಾಯಣದ, ಸುವರ್ಣ ಸಾಂಸ್ಕೃತಿಕ ಸಮುಚ್ಛಯ ಸಭಾಭವನದಲ್ಲಿ ಆಯೋಜಿತ, ಚಿಣ್ಣರ ಮೇಳಕ್ಕೆ, ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ ಚಾಲನೆ ನೀಡಿದರು.

****

ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡುಬಂದಲ್ಲಿ, ಮಕ್ಕಳ ಉಚಿತ ಸಹಾಯವಾಣಿ ಸಂಖ್ಯೆ 1098 ಕ್ಕೆ ಕರೆ ಮಾಡಿ, ಮಾಹಿತಿ ನೀಡುವಂತೆ, ಉತ್ತರಕನ್ನಡ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಕೋರಿದ್ದಾರೆ.

****

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

********